# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 359 |
| ಸದಸ್ಯರ ಹೆಸರು | : | ಶ್ರೀ ಬಿ.ಎಂ ಫಾರೂಖ್ (ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸುವ ದಿನಾಂಕ** | : | 15.02.2024 |
| **ಉತ್ತರಿಸುವ ಸಚಿವರು** | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸುಮಾರು 2400 ವರ್ಷಗಳ ಹಿಂದಿನ ರಾಜ್ಯ ಮತ್ತು ದೇಶಾದ್ಯಂತ ಸುಮಾರು 70 ಲಕ್ಷಕ್ಕೆ ಹೆಚ್ಚು ಜನ ಮಾತನಾಡುವ ತುಳು ಭಾಷೆಯನ್ನು ರಾಜ್ಯದ ಎರಡನೇ ಅಧಿಕೃತ ಭಾಷೆಯನ್ನಾಗಿ ಘೋಷಣೆ ಮಾಡುವ ಬಗ್ಗೆ ಕರಾವಳಿ ಕರ್ನಾಟಕ ಜನರ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| (ಆ) | ತುಳು ಭಾಷೆಯನ್ನು ರಾಜ್ಯದ ಎರಡನೇ ಭಾಷೆಯನ್ನಾಗಿ ಯಾವ ಕಾಲಮಿತಿಯಲ್ಲಿ ಘೋಷಿಸಲಾಗುವುದು; | ಸರ್ಕಾರದ ಆದೇಶ ಸಂಖ್ಯೆ:ಕಸಂವಾ 36 ಕೆಓಎಲ್ ಆಕ 2021 ದಿನಾಂಕ:12.01.2023ರ ಆದೇಶದಲ್ಲಿ, ತುಳು ಭಾಷೆಯನ್ನು ಕರ್ನಾಟಕ ರಾಜ್ಯದಲ್ಲಿ ಎರಡನೇ ಅಧಿಕೃತ ಭಾಷೆಯಾಗಿ ಘೋಷಣೆ ಮಾಡುವ ಕುರಿತು ಅಧ್ಯಯನ ನಡೆಸಿ ವರದಿ ನೀಡಲು ಡಾ. ಮೋಹನ ಆಳ್ವ ಇವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಆದೇಶಿಸಲಾಗಿರುತ್ತದೆ.<br><br>ಸದರಿ ಸಮಿತಿಯು ತುಳು ಭಾಷೆಯ ಸ್ವರೂಪ ಮತ್ತು ಇತಿಹಾಸ, ತುಳು ಸಾಹಿತ್ಯ ಪರಂಪರೆ, ತುಳು ಲಿಪಿ, ಪ್ರಾಚೀನ ತುಳು ಸಾಹಿತ್ಯ, ಆಧುನಿಕ ತುಳು ಸಾಹಿತ್ಯ, ಸಂಸ್ಕೃತಿ, ತುಳು ಶಾಸನಗಳ ಕುರಿತು ಅಧ್ಯಯನ ನಡೆಸಿ ವರದಿಯನ್ನು ಸಲ್ಲಿಸಿರುತ್ತದೆ.<br><br>ಸಮಿತಿಯು ಸಲ್ಲಿಸಿರುವ ವರದಿಯ ಮೇಲೆ ಕಾನೂನು ಇಲಾಖೆಯ ಅಭಿಪ್ರಾಯವನ್ನು ಕೋರಲಾಗಿ, ಕಾನೂನು ಇಲಾಖೆಯು ಈ ಕೆಳಕಂಡಂತೆ ಅಭಿಪ್ರಾಯವನ್ನು ನೀಡಿರುತ್ತದೆ.<br><br>ಯಾವುದೇ ರಾಜ್ಯ ಸರ್ಕಾರದ ಒಂದು ಭಾಷೆಯನ್ನು ಆ ರಾಜ್ಯದ ಅಧಿಕೃತ ಭಾಷೆಯೆಂದು ಘೋಷಿಸುವ ಪೂರ್ವದಲ್ಲಿ ಸದರಿ ರಾಜ್ಯಗಳು ಕಾನೂನಾತ್ಮಕವಾಗಿ ಸಮಿತಿಗಳನ್ನು ರಚನೆ ಮಾಡಿ ಮತ್ತು ವರದಿಯನ್ನು ಪಡೆದುಕೊಂಡು ಆನಂತರ ಮುಂದುವರೆಯ ಬಹುದಾಗಿರುತ್ತದೆ ಮತ್ತು ವಿವಿಧ ರಾಜ್ಯಗಳಲ್ಲಿ ಎರಡನೇ ಅಧಿಕೃತ ಭಾಷೆಯನ್ನು ಅಧಿಕೃತ ಭಾಷೆಯೆಂದು ಘೋಷಿಸಿರುವ ಬಗ್ಗೆ ಅಧ್ಯಯನ ನಡೆಸಿ, ಆನಂತರ ಮುಂದುವರೆಯಬಹುದಾಗಿದೆ ಎಂದು ತಿಳಿಸಿರುತ್ತದೆ. |

....2



File No. KCI-KOL/52/2024-AK-KC SEC (Computer No. 1398059)
Generated from eOffice by VIJAYA MANOJE, KCI-ASST-VM, ASSISTANT, KANNADA AND CULTURE SECRETARIAT on 28/07/2025 11:32 AM

-2-

| | | |
|---|---|---|
| | | ಕಾನೂನು ಇಲಾಖೆಯ ಅಭಿಪ್ರಾಯದನ್ವಯ ತಮ್ಮ ರಾಜ್ಯಗಳಲ್ಲಿ ಎರಡನೇ ಅಧಿಕೃತ ಭಾಷೆಯನ್ನಾಗಿ ಅಳವಡಿಸಿಕೊಳ್ಳಲು ತೆಗೆದುಕೊಂಡ ಕ್ರಮಗಳ ಬಗ್ಗೆ ಮಾಹಿತಿಯನ್ನು ಒದಗಿಸುವಂತೆ ಬಿಹಾರ, ಆಂಧ್ರಪ್ರದೇಶ ಮತ್ತು ಪಶ್ಚಿಮ ಬಂಗಾಳ ರಾಜ್ಯಗಳನ್ನು ಕೋರಲಾಗಿರುತ್ತದೆ. |
| ಇ) | ಸಂವಿಧಾನದ 8ನೇ ಅನುಚ್ಛೇದದಲ್ಲಿ ತುಳು ಭಾಷೆ ಸೇರಿಸಲು ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಯಾವಾಗ ಸಲ್ಲಿಸಲಾಗುವುದು ಹಾಗೂ ಪ್ರಸ್ತಾವನೆ ಸಲ್ಲಿಸಲು ತೆಗೆದುಕೊಳ್ಳುವ ಕ್ರಮಗಳೇನು? | ತುಳು ಭಾಷೆಯನ್ನು ಸಂವಿಧಾನದ 8ನೇ ಅನುಚ್ಛೇದದಲ್ಲಿ ಸೇರಿಸುವ ಸಂಬಂಧ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಲಾಗಿರುತ್ತದೆ. |

ಸಂಖ್ಯೆ: ಕಸಂವಾ 52 ಕೆಒಎಲ್ ಆಕ 2024.

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು